ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ಆ) -ಇಲ್ಲ-

ಇ) ಉದ್ಭವಿಸುವುದಿಲ್ಲ.

ಈ) ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಕಟೀಲು ಬೈಪಾಸುರಸ್ತೆ

265 - ಶ್ರೀ ಸೋಮಪ್ಪ ಸುವರ್ಣ (ಮೂಡಬಿದ್ರೆ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕಟೀಲು ದೇವಸ್ಥಾನದ- ವಠಾರದಲ್ಲಿ ಜನ ಸಂದಣಿಯಿಂದ ರಾಜ್ಯ ಹೆದ್ದಾರಿಯಲ್ಲಿ ವಾಹನಸಂಚಾರಕ್ಕೆ ತೊಂದರೆಯಾಗುವುದರಿಂದ ಬೈಪಾಸು ರಸ್ತೆಯ ನಿರ್ಮಾಣ ಮಾಡಲಾಗುವುದೆಂದು ವಿಧಾನಸಭೆಯಲ್ಲಿ ಇತ್ತ ಭರವಸೆಯಂತೆ ಸರ್ಕಾರವು ಏನು ಕ್ರಮ ಕೈಗೊಂಡಿದೆ.

ಆ) ಈ ಯೋಜನೆಗೆ ತಗಲುವ ಅಂದಾಜು ವೆಚ್ಚವೆಷ್ಟು?

ಇ) ವಿಮಾನ ನಿಲ್ದಾಣಕ್ಕೆ ಹೋಗುವ ಜನರಿಗೆ ತೊಂದರೆಯಾಗದಂತೆ ಈ ರಸ್ತೆಯ ನಿರ್ಮಾಣವನ್ನು ಯಾವಾಗ ಪ್ರಾರಂಭ ಮಾಡಲಾಗುವುದು.

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು):

ಅ) ಭೂಸ್ವಾಧೀನದ ವಿಷಯವನ್ನು ಒಳಗೊಂಡಿದ್ದರಿಂದ ಈ ಕಾಮಗಾರಿಯನ್ನು 1992-93ನೇ ಸಾಲಿನ ಆಯವ್ಯಯದ ಪಟ್ಟಿಯಲ್ಲಿ ಸೇರಿಸಲಾಗಿಲ್ಲ.

ಆ) ಒಟ್ಟು 13.00 ಲಕ್ಷ ರೂ. ಅಂದಾಜಾಗುತ್ತದೆ.

ಇ) ಭೂಸ್ವಾಧೀನವಾದ ನಂತರ ಕೆಲಸವನ್ನು ಪ್ರಾರಂಭಿಸಲಾಗುವುದು.

ಚಿತ್ತಾಪುರ ಬಳಿ ರೈಲ್ವೆ ಹಳಿ ಮೇಲೆ ಸೇತುವೆ ನಿರ್ಮಾಣ.

863-ಶ್ರೀ ಬಸವಂತರೆಡ್ಡಿ ಮೊತಕಪಲ್ಲಿ (ಸೇಡಂ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಲ್ಬರ್ಗಾ ಜಿಲ್ಲೆಯ ಸೇಡಂ ಹಾಗೂ ಚಿತ್ತಾಪೂರ ಕ್ಷೇತ್ರದ ಸುಮಾರು 25-30 ಗ್ರಾಮಗಳಿಗೆ ಸಂಪರ್ಕವಿರುವ ರಸ್ತೆಗೆ ಚಿತ್ತಾಪೂರಿನ ಸಮೀಪ ರೈಲ್ವೆ ಹಳಿ ಮೇಲೆ ಸೇತುವೆ ಇಲ್ಲದೆ ಬಸ್ಸ್‌ಗಳು ಹಾಗೂ ವಾಹನಗಳ ಪ್ರಯಾಣ ಕಷ್ಟಕರವಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಈ ಮೇಲಿನ ಸೇತುವೆಗಾಗಿ ಅಡಿಗಲ್ಲು ಸಮಾರಂಭವನ್ನು ಮಾಡಿದ್ದು ನಿಜವೇ?

ಇ) ಹಾಗಿದ್ದಲ್ಲಿ ಅಡಿಗಲ್ಲು ಸಮಾರಂಭ ಮಾಡಿರುವ 'ಸ್ಥಳ ಯಾವ ಸರ್ವೆ ನಂಬರಿನಲ್ಲಿ ಇದೆ. ಈ ಕೆಲಸ ಮಂಜೂರಾಗಿದ್ದರೂ ಕೆಲಸ ಪ್ರಾರಂಭವಾಗಿಲ್ಲದಿರುವುದಕ್ಕೆ ಕಾರಣಗಳೇನು?

ಈ) ಈಗಾಲಾದರೂ ಕೆಲಸ ಪ್ರಾರಂಭ ಮಾಡಿ ಆ ಭಾಗದ ಜನರ ಹಾಗೂ ವಾಹನಗಳ ಸಂಚಾರಕ್ಕೆ ಅನುಕೂಲ ಮಾಡಿಕೊಡಲು ಸರ್ಕಾರವು ಕ್ರಮ ಕೈಗೊಳ್ಳುವುದೆ?